## 14. ಅಗಲಿದ ಗಣ್ಯರಿಗೆ ಉಭಯ ಸದನದಲ್ಲಿ ಸಂತಾಪ

ಕೊರೋನಾ ಆತಂಕದಲ್ಲಿಯೇ ಆರಂಭಗೊಂಡ ವಿಧಾನಮಂಡಲ ಅಧಿವೇಶನದ ಮೊದಲ ದಿನ ಉಭಯ ಸದನದಲ್ಲಿ ರಾಜ್ಯ ಹಾಗೂ ದೇಶದಲ್ಲಿ ಇತ್ತೀಚಿಗೆ ನಿಧನರಾದ ಗಣ್ಯರಿಗೆ ಸಂತಾಪ ಸಲ್ಲಿಸಲಾಯಿತು. ಬೆಳಿಗ್ಗೆ 11 ಗಂಟೆಗೆ ಕಲಾಪ ಸಮಾವೇಶಗೊಳ್ಳುತ್ತಿದ್ದಂತೆ ವಿಧಾನಸಭಾ ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ, ಕಾಗೇರಿ ಅವರು ಮಾಜಿ ರಾಷ್ಟ್ರಪತಿ ಪ್ರಣಬ್ ಮುಖರ್ಜಿ ಸೇರಿದಂತೆ ಅಗಲಿದ ಗಣ್ಯರಿಗೆ ಸಂತಾಪ ಸೂಚಕ ನಿರ್ಣಯ ಮಂಡಿಸಿದರು. ಗಣ್ಯರೊಂದಿಗೆ ಈ ಬಾರಿ ಕೊರೋನಾಕ್ಕೆ ಬಲಿಯಾದವರಿಗೆ ಹಾಗೂ ಕೊರೋನಾದಿಂದ ಮೃತಪಟ್ಟಿರುವ ಕೊರೋನಾ ವಾರಿಯರ್ಸ್, ಚೀನಾದೊಂದಿಗೆ ಹೋರಾಡಿ ಮಡಿದ 20 ಯೋಧರಿಗೆ ಹಾಗೂ ಮಡಿಕೇರಿ ಭೂ ಕುಸಿತದಲ್ಲಿ ಮಣಿದ ಒಂದೇ ಕುಟುಂಬದ ಐವರಿಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ಮುಖ್ಯಮಂತ್ರಿ ಯಡಿಯೂರಪ್ಪ ಮಾತನಾಡಿ, ಕಳೆದ ಅಧಿವೇಶನ ಮತ್ತು ಈ ಅವಧಿಯ ನಡುವೆ ಹಲವು ಗಣ್ಯರು ನಮ್ಮನ್ನು ಆಗಲಿದ್ದಾರೆ, ಶಿರಾ ಶಾಸಕ ಸತ್ಯನಾರಾಯಣ ಅವರು ಬಡವರು ಮತ್ತು ರೈತರ ಪರವಾಗಿದ್ದರು. ಮಾಜಿ ರಾಷ್ಟ್ರಪತಿ ಪ್ರಣಬ್ ಮುಖರ್ಜಿ ಅವರು ಗುಮಾಸ್ತ ಕೆಲಸದಿಂದ ರಾಷ್ಟ್ರಪತಿ ಹುದ್ದೆಯವರೆಗಿನ ರಾಜಕೀಯ ಜೀವನ ಅದ್ಭುತವಾದುದು. ಅತ್ಯುತ್ತಮ ರಾಜಕಾರಣಿಯಾಗಿ ದೇಶಕ್ಕೆ ಅವರು ನೀಡಿದ ಕೊಡುಗೆ ಅಪಾರವಾದುದು. ರಾಷ್ಟ್ರಪತಿ ಭವನವನ್ನು ಜನರಿಗೆ ಹತ್ತಿರವಾಗಿಸಿ, ಹೆಚ್ಚು ಪ್ರಜಾಸತ್ತಾತ್ಮಕವಾಗಿಸಿದ್ದರು. ಅವರ ನಿಧನದಿಂದ ಸಮರ್ಥ ಮತ್ತು ಅತ್ಯುತ್ತಮ ನಾಯಕರೊಬ್ಬರನ್ನು ಕಳೆದುಕೊಂಡಂತಾಗಿದೆ ಎಂದರು.

ಪ್ರತಿಪಕ್ಷ ನಾಯಕ ಸಿದ್ಧರಾಮಯ್ಯ ಮಾತನಾಡಿ, ಪ್ರಣಬ್ ಮುಖರ್ಜಿ ಅವರು ಹಣಕಾಸು, ವಿದೇಶಾಂಗ, ರಕ್ಷಣಾ ಸೇರಿ ಕೇಂದ್ರದ ಮಹತ್ವದ ಖಾತೆಗಳನ್ನು, ಇದರೊಂದಿಗೆ ವಾಣಿಜ್ಯ, ಕೈಗಾರಿಕಾ ಖಾತೆಗಳನ್ನು ನಿಭಾಯಿಸಿದ್ದರು. ಪಿ.ವಿ. ನರಸಿಂಹರಾವ್ ಪ್ರಧಾನಮಂತ್ರಿಯಾಗಿದ್ದಾಗ 5 ವರ್ಷಗಳ ಕಾಲ ಯೋಜನಾ ಆಯೋಗದ ಉಪಾಧ್ಯಕ್ಷರಾಗಿದ್ದರು.

ದೇಶದ ಹಣಕಾಸು ವ್ಯವಸ್ಥೆ ಬಗ್ಗೆ ಆಳವಾದ ಅಧ್ಯಯನ ಮಾಡಿದ್ದರು. ಉತ್ತಮ ಹಣಕಾಸು ಸಚಿವ ಎಂಬ ಹೆಗ್ಗಳಿಕೆಗೂ ಪಾತ್ರರಾಗಿದ್ದರು. ತಾವು ಮುಖ್ಯಮಂತ್ರಿಯಾಗಿದ್ದಾಗ ಅನೇಕ ಬಾರಿ ಅವರನ್ನು ಭೇಟಿ ಮಾಡಲು ಅವಕಾಶ ಸಿಕ್ಕಿತ್ತು. ಯಾವುದೇ ಮಸೂದೆಗಳು ಅಂಕಿತಕ್ಕೆ ಹೋದಾಗ, ಕೂಡಲೇ ಅವರು ಅಂಕಿತ ಹಾಕುತ್ತಿದ್ದರು. ಎಸ್‌ಟಿಪಿ, ಟಿಎಸ್‌ಪಿ ಮಸೂದೆ ವಿಚಾರವಾಗಿ ಅವರನ್ನು ಭೇಟಿ ಮಾಡಿ ವಿವರಿಸಿದ್ದೆ. ದೆಹಲಿಯಿಂದ ಬೆಂಗಳೂರಿಗೆ ಬರುವ ಮೊದಲೇ ಅಂಕಿತ ಹಾಕಿ ಕಳುಹಿಸಿದ್ದರು ಎಂದು ಸ್ಮರಿಸಿದರು.

**ಅಗಲಿದ ಗಣ್ಯರ ಪಟ್ಟಿ:–** ಮಾಜಿ ರಾಷ್ಟ್ರಪತಿ ಪ್ರಣಬ್ ಮುಖರ್ಜಿ, ಮಾಜಿ ಶಾಸಕ ಎಂ. ವಿ. ರಾಜಶೇಖರನ್, ರಾಜ್ಯ ಸಭಾ ಸದಸ್ಯ ಅಶೋಕ್ ಗಸ್ತಿ, ಶಾಸಕ ವಿ. ಸತ್ಯನಾರಾಯಣ, ವಿನ್ನಿಫ್ರೆಡ್ ಫರ್ನಾಂಡೀಸ್, ರಾಜಾ ರಂಗಪ್ಪ ನಾಯಕ, ಮದನ ಗೋಪಾಲ ನಾಯಕ್, ಜಿ. ರಾಮಮೂರ್ತಿ, ಹೊಸ್ತೋಟ ಗಜಾನನ ಭಟ್ಟ, ನಿಸಾರ್ ಅಹಮದ್, ಹಿರಿಯ ಗಾಯಕಿ ಡಾ: ಶಾಮಲಾ ಜಿ. ಭಾವೆ, ಶಾಂತದೇವಿ, ಸುಭದ್ರಮ್ಮ, ಪಂಡಿತ್ ಜಸ್ ರಾಜ್, ಕೇಶವಾನಂದ ಭಾರತಿ ಶ್ರೀಗಳು ಸೇರಿದಂತೆ ಅಗಲಿದ ಗಣ್ಯರಿಗೆ ಸಂತಾಪ ಸೂಚನೆ ಗೊತ್ತುವಳಿ ಮಂಡಿಸಿದರು.

ಆಧಾರ:ವಿಶ್ವವಾಣಿ, ದಿನಾಂಕ:22.09.2020